**ಕರ್ನಾಟಕ ಸರ್ಕಾರ**

ಸಂ:ಗ್ರಾಅಪ/13/ಗ್ರಾನೀಸ(2)2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:29.01.2014

**ಕಾರಣ ಕೇಳುವ ನೋಟೀಸ್**

ದಿನಾಂಕ:18.01.2014ರಂದು ನಡೆದ **Video Conference**ನಲ್ಲಿ ತಮ್ಮ ಜಿಲ್ಲಾ ಪಂಚಾಯತ್‌ನ **PRED** ವ್ಯಾಪ್ತಿಯಲ್ಲಿ ಅನುದಾನ ವಿನಿಯೋಗ ಶೇ.50ಕ್ಕಿಂತ ಕಡಿಮೆಯಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಈಗಾಗಲೇ ಸೂಚನೆ ನೀಡಿದಂತೆ, ಕ್ರಿಯಾ ಯೋಜನೆಯಲ್ಲಿನ ಕಾಮಗಾರಿಗಳಿಗೆ ತಾಂತ್ರಿಕ / ಆರ್ಥಿಕ ಅನುಮೋದನೆ ನೀಡುವ ಅಧಿಕಾರವನ್ನು ಜಿಲ್ಲಾ ಮಟ್ಟಕ್ಕೆ ನೀಡಿದ್ದರೂ ಸಹ ತಮ್ಮ ಜಿಲ್ಲೆಯಲ್ಲಿನ ಗ್ರಾಮೀಣ ನೀರು ಪೂರೈಕೆ ಯೋಜನೆಯ ಪ್ರಗತಿ ತೀರ ಕಡಿಮೆ ಇರುವುದು ತಮ್ಮ ವಿಫಲತೆಯನ್ನು ತೋರಿಸುತ್ತದೆ. ಇದರಿಂದಾಗಿ ಕುಡಿಯುವ ನೀರಿನಂತಹ ಪ್ರಾಮುಖ್ಯ ವಿಷಯದಲ್ಲಿ ಸರ್ಕಾರದ ಪ್ರಯತ್ನಕ್ಕೆ ಹಿನ್ನೆಡೆಯಾಗಿದ್ದು, ಸಾಮಾನ್ಯ ಜನರಿಗೆ ಕಾಲಮಿತಿಯೊಳಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಸಾಧ್ಯವಾಗಿಲ್ಲ. ಇದರಿಂದ ಕೇಂದ್ರ ಸರ್ಕಾರದಿಂದ ನಿರೀಕ್ಷಿತ ಹೆಚ್ಚುವರಿ ಅನುದಾನವನ್ನು ಪಡೆಯಲು ಸಹ ಸಾಧ್ಯವಾಗಿರುವುದಿಲ್ಲ. ಆದುದರಿಂದ, ನಿಮ್ಮ ಕರ್ತವ್ಯ ನಿರ್ಲಕ್ಷ್ಯತೆ ಮತ್ತು ಅಸಮರ್ಥತೆ ಕುರಿತಂತೆ ಸರ್ಕಾರಕ್ಕೆ ಒಂದು ವಾರದೊಳಗೆ ಸೂಕ್ತ ವಿವರಣೆಯನ್ನು ಜಿಲ್ಲಾ ಪಂಚಾಯತಿ / **CE,PRED** ಮುಖೇನ ನೀಡಲು ತಿಳಿಸಿದೆ.

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
ಇಮೇಲ್:rk3452000@yahoo.co.in
ಫೋನ್:22032806, ಫ್ಯಾಕ್ಸ್:22203175

**ಇವರಿಗೆ:**

1. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೆಂಗಳೂರು(ಗ್ರಾ), ಗದಗ, ಉತ್ತರ ಕನ್ನಡ, ಬಿಜಾಪುರ, ಹಾವೇರಿ, ಚಿತ್ರದುರ್ಗ, ಧಾರವಾಡ, ರಾಯಚೂರು, ಚಿಕ್ಕಮಗಳೂರು, ಬಾಗಲಕೋಟೆ, ಬೀದರ್, ಯಾದಗಿರಿ, ಬಳ್ಳಾರಿ, ಉಡುಪಿ, ಗುಲ್ಬರ್ಗಾ ಮತ್ತು ಕೊಡಗು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು-09.
3. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು(ಗ್ರಾ), ಗದಗ, ಉತ್ತರ ಕನ್ನಡ, ಬಿಜಾಪುರ, ಹಾವೇರಿ, ಚಿತ್ರದುರ್ಗ, ಧಾರವಾಡ, ರಾಯಚೂರು, ಚಿಕ್ಕಮಗಳೂರು, ಬಾಗಲಕೋಟೆ, ಬೀದರ್, ಯಾದಗಿರಿ, ಬಳ್ಳಾರಿ, ಉಡುಪಿ, ಗುಲ್ಬರ್ಗಾ ಮತ್ತು ಕೊಡಗು.

**ಪ್ರತಿ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು(ಗ್ರಾ), ಗದಗ, ಉತ್ತರ ಕನ್ನಡ, ಬಿಜಾಪುರ, ಹಾವೇರಿ, ಚಿತ್ರದುರ್ಗ, ಧಾರವಾಡ, ರಾಯಚೂರು, ಚಿಕ್ಕಮಗಳೂರು, ಬಾಗಲಕೋಟೆ, ಬೀದರ್, ಯಾದಗಿರಿ, ಬಳ್ಳಾರಿ, ಉಡುಪಿ, ಗುಲ್ಬರ್ಗಾ ಮತ್ತು ಕೊಡಗು.